## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 924 |
| ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 24-07-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಪ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಚಿಕ್ಕಮಗಳೂರು-ಬೇಲೂರು-ಹಾಸನ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ ಯನ್ನಾಗಿ ಮೇಲ್ದರ್ಜೆಗೇರಿಸಿದ್ದು ಯಾವಾಗ; | ಚಿಕ್ಕಮಗಳೂರು ನಗರದ Adichunchanagiri Institute of Technology (AIT) ಬಳಿಯ ರಾಷ್ಟ್ರೀಯ ಹೆದ್ದಾರಿ-173ರ ಕೂಡು ರಸ್ತೆಯಿಂದ ಬೇಲೂರು ನಗರದ ನೆಹರು ಸರ್ಕಲ್ ಬಳಿಯ ರಾಷ್ಟ್ರೀಯ ಹೆದ್ದಾರಿ-73ರ ಕೂಡು ರಸ್ತೆಯ ವರೆಗಿನ 24.00 ಕಿ.ಮೀ. ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ-373 ಎಂದು ಕೇಂದ್ರ ಭೂಸಾರಿಗೆ ಮಂತ್ರಾಲಯವು ಭಾರತ ಗೆಜೆಟ್ ಅಧಿಸೂಚನೆ ಸಂಖ್ಯೆ. S.O. 4346(E) ಪ್ರಕಾರ ದಿನಾಂಕ: 15.09.2022 ರಂದು ಉನ್ನತೀಕರಿಸಿದೆ. |
| ಆ) | ಈ ರಸ್ತೆಯನ್ನು ನಾಲ್ಕು ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಈ ರಸ್ತೆಯನ್ನು ನಾಲ್ಕು ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುತ್ತದೆ. |
| ಇ) | ಈ ಪ್ರಸ್ತಾವನೆ ಯಾವ ಹಂತದಲ್ಲಿದೆ; ರಸ್ತೆಯ ಅಭಿವೃದ್ಧಿಗೆ ವಿಸ್ತೃತ ಯೋಜನಾ ವರದಿ ತಯಾರಿಸಲಾಗಿದೆಯೇ; ಯೋಜನೆಯ ಅಂದಾಜು ಮೊತ್ತವೆಷ್ಟು; (ಸಮಗ್ರ ವಿವರ ನೀಡುವುದು) | ಸದರಿ ಬೇಲೂರಿನಿಂದ – ಚಿಕ್ಕಮಗಳೂರು ವರೆಗಿನ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ-373 ಎಂದು ಘೋಷಣೆಯಾದ ಬಳಿಕ ಸದರಿ ರಸ್ತೆಯ ಭಾಗವನ್ನು 4 ಪಥದ ರಸ್ತೆಯನ್ನಾಗಿ ನಿರ್ಮಿಸುವ ಸಂಬಂಧ ಕಾರ್ಯ ಸಾಧ್ಯತಾ ವರದಿ ಮತ್ತು ಸಮಗ್ರ ಯೋಜನಾ ವರದಿ ತಯಾರಿಕೆಗಾಗಿ (F/S Detailed project Report) M/s. Indian Technocrat Ltd in Association with M/s Vistara Infra Consultants ರವರಿಗೆ ಗುತ್ತಿಗೆಯನ್ನು ನೀಡಲಾಗಿದ್ದು ಪ್ರಸ್ತುತ ವಿಸ್ತೃತ ಯೋಜನಾ ವರದಿಯನ್ನು ತಯಾರಿಸುವ ಕಾರ್ಯ ಅಂತಿಮ ಹಂತದಲ್ಲಿ ಇರುತ್ತದೆ. |
| ಈ) | ಈ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು? | ಸದರಿ ರಸ್ತೆಯ ವಿಸ್ತೃತ ಯೋಜನಾ ವರದಿ (DPR) ತಯಾರಿಸುವ ಕಾರ್ಯ ಅಂತಿಮ ಹಂತದಲ್ಲಿರುತ್ತದೆ. ವಿಸ್ತೃತ ಯೋಜನಾ ವರದಿ (DPR)ಗೆ ಕೇಂದ್ರ ಭೂಸಾರಿಗೆ ಹೆದ್ದಾರಿಗಳ ಮಂತ್ರಾಲಯ, ನವದೆಹಲಿ ರವರಿಂದ ಅನುಮೋದನೆ ಪಡೆದು ಮುಂದಿನ ಕಾರ್ಯ ಪ್ರಾರಂಭಿಸಬೇಕಾಗಿರುತ್ತದೆ. |

ಸಂಖ್ಯೆ: ಲೋಇ 147 ಸಿಎನ್‌ಹೆಚ್ 2024 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು